ಹಾಸನ ಹಾಲು ಒಕ್ಕೂಟದಲ್ಲಿ ರೋಸ್ಟರ್ ಪದ್ಧತಿಯನ್ನು ಅನುಸರಿಸದೆ ನೇಮಕಾತಿ ಮಾಡಿಕೊಂಡಿರುವುದು.

231(2658)

ಶ್ರೀ ಕೆ.ಹೆಚ್.ಹನುಮೇಗೌಡ(ಹಾಸನ): ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. ಹಾಸನ್ನ ಹಾಲು ಒಕ್ಕೂಟದಲ್ಲಿ ನೇಮಕಾತಿ ಮಾಡಿಕೊಳ್ಳುವಾಗ ಸರ್ಕಾರದ ನಿಯಮಾವಳಿಯಂತೆ ರೋಸ್ಟರ್ ಪದ್ಧತಿಯನ್ನು ಅನುಸರಿಸದಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೇ?

2. ರೋಸ್ಟರ್ ಪದ್ಧತಿಯನ್ನು ಅನುಸರಿಸದಿರುವುದು ಅಕ್ಷಮ್ಯ ಅಪರಾಧವಲ್ಲವೇ?

3. ಈ ತಪ್ಪಿನ ಬಗ್ಗೆ ಸರ್ಕಾರ ಸಂಬಂಧಪಟ್ಟ ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಂಡಿದೆ?

ಶ್ರೀ ಡಿ.ಕೆ.ಶಿವಕುಮಾರ್ (ಸಹಕಾರ ಸಚಿವರು):

1. ಬಂದಿದೆ.

2. ಸಹಕಾರ ಸಂಘಗಳ ನಿಬಂಧಕರ ಆದೇಶ ಉಲ್ಲಂಘನೆಯಾಗಿದೆ.

3. ಸಂಬಂಧಪಟ್ಟ ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳುವುದನ್ನು ಸೇರಿ ಸಹಕಾರ ಸಂಘಗಳ ಕಾಯ್ದೆ ಕಲಂ 68ರಡಿ ಆಡಳಿತ ಮಂಡಳಿಗೆ ನಿರ್ದೇಶನ ನೀಡಿದೆ. XXX ಇಲಾಖಾಧಿಕಾರಿಗಳ ಮೇಲೆ ಶಿಸ್ತಿನ ಕ್ರಮಕ್ಕೆ ಕ್ರಮ ಕೈಗೊಳ್ಳಲಾಗುತ್ತಿದೆ.

ಮಂಡ್ಯ ತಾಲ್ಲೂಕಿನ ಕಛೇರಿಗೆ ಕಟ್ಟಡದ ಸೌಲಭ್ಯ.

232(2672)

ಶ್ರೀ ಆತ್ಮಾನಂದ ಎಂ.ಎಸ್.(ಮಂಡ್ಯ): ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. ಮಂಡ್ಯ ತಾಲ್ಲೂಕು ಅತಿ ದೊಡ್ಡ ತಾಲ್ಲೂಕಾಗಿದ್ದು, ತಾಲ್ಲೂಕಿನ ತಹಸೀಲ್ದಾರ್ ಕಛೇರಿಗೆ ಸೂಕ್ತ ಕಟ್ಟಡ ಇಲ್ಲದಿರುವುದನ್ನು ಸರ್ಕಾರ ಗಮನಿಸಿದೆಯೆ?